ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಇಲ್ಲ

ಆ) ಸೊರಬ ತಾಲ್ಲೂಕು ಅನವಟ್ಟಿಯಲ್ಲಿ ಈಗಾಗಲೇ ಸಹ ಶಿಕ್ಷಣವನ್ನು ಬೋಧಿಸುತ್ತಿರುವ ಒಂದು ಸರ್ಕಾರಿ ಪದವಿಪೂರ್ವ ಕಾಲೇಜು ಅಸ್ತಿತ್ವದಲ್ಲಿದೆ.

ಆನವಟ್ಟಿಯಲ್ಲಿನ ಸರ್ಕಾರಿ ಪ್ರೌಢಶಾಲೆಯಲ್ಲಿ ಪ್ರಸ್ತುತ ಕೇವಲ 42 ಬಾಲಕಿಯರು ಮಾತ್ರ ಎಸ್‌ಎಸ್‌ಎಲ್‌ಸಿ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವುದರಿಂದ ಸದರಿ ಪ್ರೌಢಶಾಲೆಯನ್ನು ಉನ್ನತೀಕರಿಸುವ ಅಗತ್ಯತೆ ಇರುವುದಿಲ್ಲ.

ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯ

1397(893); ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ಸೊರಬ ಮತ್ತು ಅನವಟ್ಟಿಯಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ, ಪೀಠೋಪಕರಣಗಳು ಹಾಗೂ ಇತರೆ ಸೌಲಭ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಈವರೆಗೂ ಕೈಗೊಂಡ ಕ್ರಮಗಳೇನು (ವಿವರ ನೀಡುವುದು);

ಇ) ಮೂಲಭೂತ ಸೌಕರ್ಯಗಳನ್ನು ಎಷ್ಟು ದಿನದೊಳಗೆ ಕಲ್ಪಿಸಲಾಗುವುದು (ವಿವರ ನೀಡುವುದು)?

ಶ್ರೀ ಕಿಮ್ಮನೆ ರತ್ನಾಕರ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬಂದಿದೆ.

ಆ) ರಾಜ್ಯದಲ್ಲಿ ನಡೆಯುತ್ತಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಸ್ಥಳೀಯವಾಗಿ ಲಭ್ಯವಿರುವ ಪ್ರೌಢಶಾಲೆಗಳ ಶೌಚಾಲಯ ಮತ್ತು ಇತರೆ ವ್ಯವಸ್ಥೆಯನ್ನೇ ಉಪಯೋಗಿಸಿಕೊಂಡು ಕಾರ್ಯನಿರ್ವಹಿಸುತ್ತಿದೆ. ಈಗಾಗಲೇ ನಬಾರ್ಡ್ ಸಹಯೋಗದ ಆರ್‌ಐಡಿಎಫ್ ಯೋಜನೆಯಡಿ ಹಾಗೂ ಸರ್ಕಾರದ ಬಂಡವಾಳ ವೆಚ್ಚದ ಯೋಜನೆಯಡಿ ಶೌಚಾಲಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಅಲ್ಲದೆ ಈ ಆರ್ಥಿಕ ವರ್ಷದಲ್ಲಿ ಆರ್‌ಐಡಿಎಫ್–19ರ ಯೋಜನೆಯಡಿ 147 ಹಾಗೂ ಆರ್‌ಐಡಿಎಫ್–20ರ ಯೋಜನೆಯಡಿ 149 ಕಾಲೇಜುಗಳಿಗೆ ಮತ್ತು ಸರ್ಕಾರದ ಬಂಡವಾಳ ವೆಚ್ಚದ ಯೋಜನೆಯಡಿ 65 ಕಾಲೇಜುಗಳಿಗೆ ಶೌಚಾಲಯವನ್ನು ನಿರ್ಮಿಸಲು ಅನುಮೋದನೆ ದೊರೆತಿದೆ.

ಇ) ರಾಜ್ಯ ವಲಯದಲ್ಲಿ ಅನುದಾನದ ಲಭ್ಯತೆ ಆಧಾರದ ಮೇಲೆ ಹಂತ ಹಂತವಾಗಿ ಕ್ರಮ ವಹಿಸಲಾಗುವುದು.

ಅನವಟ್ಟಿ ಪದವಿ ಪೂರ್ವ ಕಾಲೇಜಿನಲ್ಲಿ ವಿಜ್ಞಾನ ವಿಭಾಗ

1398(894); ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ಸೊರಬ ತಾಲ್ಲೂಕಿನ ಅನವಟ್ಟಿಯಲ್ಲಿರುವ ಪದವಿ ಪೂರ್ವ ಕಾಲೇಜಿಗೆ ವಿಜ್ಞಾನ ವಿಭಾಗ ಮಂಜೂರಾಗಿದ್ದು, ಅದಕ್ಕೆ ಪೂರಕವಾದ ಪ್ರಯೋಗಾಲಯ ಇಲ್ಲದಿರುವುದು ಸರ್ಕಾದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರಯೋಗಾಲಯವನ್ನು ಮಂಜೂರು ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆಯೇ;

ಇ) ಹಾಗಿದ್ದಲ್ಲಿ, ಯಾವ ಅವಧಿಯೊಳಗೆ ಪ್ರಯೋಗಾಲಯ ಮಂಜೂರು ಮಾಡಲಾಗುವುದು (ಮಾಹಿತಿ ನೀಡುವುದು)?